ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೨೭

**ಪಟ್ಟಿ – ೦೮**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತೆಂಟನೆಯ ಅಧಿವೇಶನ**

**ಬುಧವಾರ, ದಿನಾಂಕ : ೨೪ನೇ ಜುಲೈ, ೨೦೧೯.**

---

**ಸಮೂಹ – III**

೧. ಕಂದಾಯ ಸಚಿವರು.

೨. ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

೩. ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

೪. ಕಾರ್ಮಿಕ ಸಚಿವರು.

೫. ಅರಣ್ಯ ಸಚಿವರು.

೬. ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.

---

## ವಿಲೇವಾರಿಯಾಗದೆ ಬಾಕಿ ಇರುವ ಕಡತಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೬ (೧೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯ ಜೂನ್ ಅಂತ್ಯಕ್ಕೆ ಕಂದಾಯ ಇಲಾಖೆಯಲ್ಲಿ ವಿಲೇವಾರಿಯಾಗದೇ ಬಾಕಿ ಇರುವ ಕಡತಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಡತ ವಿಲೇವಾರಿ ಸಪ್ತಾಹದಲ್ಲಿ ಒಟ್ಟು ಎಷ್ಟು ಕಡತಗಳನ್ನು ವಿಲೇವಾರಿ ಮಾಡಲಾಗಿದೆ; ಬಾಕಿ ಇರುವ ಕಡತಗಳೆಷ್ಟು;

(ಇ) ಕಡತಗಳು ವಿಲೇವಾರಿಯಾಗದೆ ಬಾಕಿ ಉಳಿಯಲು ಕಾರಣಗಳೇನು; ಯಾವ ಹಂತದ ಅಧಿಕಾರಿಗಳ ಬಳಿ ಕಡತಗಳು ಬಾಕಿ ಉಳಿದಿರುತ್ತವೆ;

(ಈ) ಕಡತಗಳನ್ನು ವಿಲೇವಾರಿ ಮಾಡದೆ ಬಾಕಿ ಉಳಿಸಿಕೊಂಡ ಅಧಿಕಾರಿಗಳ ವಿರುದ್ಧ ಸಿ.ಸಿ.ಎ. ನಿಯಮಾವಳಿ ಅನ್ವಯ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಮುಂದಿನ ದಿನಗಳಲ್ಲಿ ಕಡತಗಳು ಬಾಕಿ ಉಳಿಯದಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪೋಡಿ ಮುಕ್ತ ಅಭಿಯಾನದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೭ (೨೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭೂನ್ಯಾಯ ಮಂಡಳಿಯಲ್ಲಿ ಮಂಜೂರಾದ ಮತ್ತು ದರ್ಖಾಸ್ತು ಮಂಜೂರಾದ ಅಂಶಿಕ ಜಮೀನುಗಳ ಖಾತೆದಾರರ ಪೋಡಿ

ಮಾಡದೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ದಪಡಿಸುವಲ್ಲಿ ಅಸಾಧ್ಯವಾಗಿದ್ದು, ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದಿರಲು ಕಾರಣಗಳೇನು;

(ಆ) ಜನಸಾಮಾನ್ಯರಿಗೆ ಸರಿಯಾದ ಜಾಗದ ದಾಖಲೆಗಳನ್ನು ಸಿದ್ಧಪಡಿಸುವಲ್ಲಿ ನೆರವಾಗಲು ಪೋಡಿ ಮುಕ್ತ ಅಭಿಯಾನವನ್ನು ಯಾವಾಗ ಪ್ರಾರಂಭಿಸಲಾಗಿದೆ. ಈ ಅಭಿಯಾನದಂತೆ ಮಂಡ್ಯ ಜಿಲ್ಲೆಯಲ್ಲಿ ಭೂ–ಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳು ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ನಾಗಮಂಗಲ ತಾಲ್ಲೂಕಿನಲ್ಲಿ ಭೂಮಾಪನ ಕಾರ್ಯ ಪೂರ್ಣಗೊಂಡ ಗ್ರಾಮಗಳಲ್ಲಿ ಖಾತೆದಾರರಿಗೆ ಪಹಣಿ ದಾಖಲಿಸಿ, ಪಹಣಿ ಪತ್ರ ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ರಸ್ತೆಗಳ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೮ (೭೦೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಗ್ರಾಮೀಣ ರಸ್ತೆಗಳ ಅಭಿವೃದ್ಧಿ, ರಸ್ತೆಗಳ ಅಗಲೀಕರಣ ಸೇರಿದಂತೆ ಇತರೆ ಸರ್ಕಾರಕ್ಕೆ ಸಂಬಂಧಿಸಿದ ಕಾಮಗಾರಿಗಳನ್ನು ನಡೆಸುವ ಸಂಬಂಧ ವಿವಿಧ ಇಲಾಖೆಗಳಿಗೆ ಮರಗಳ ತೆರವಿಗಾಗಿ ಅರಣ್ಯ ಇಲಾಖೆ ವಿಧಿಸುವ ಮೊತ್ತ ಎಷ್ಟು; ಈ ಸಂಬಂಧ ಕಳೆದ ೨ ವರ್ಷಗಳಿಂದ ಈವರೆವಿಗೆ ಎಷ್ಟು ಹಣ ಜಮಾ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಅರಣ್ಯ ಇಲಾಖೆ ಸರ್ಕಾರಿ ಅಭಿವೃದ್ಧಿ ಕಾಮಗಾರಿಗಳ ಸಂಬಂಧ ಜಮಾ ಮಾಡಿರುವ ಹಣವನ್ನು ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗುತ್ತಿದೆ; (ಕಾರ್ಯಕ್ರಮಗಳ ಸಂಪೂರ್ಣ ವಿವರ ನೀಡುವುದು)

(ಇ) ರಸ್ತೆಗಳ ಅಗಲೀಕರಣ ಕಾಮಗಾರಿಗಳು ಮುಗಿದ ನಂತರ ರಸ್ತೆ ಬದಿಯಲ್ಲಿ ಮರಗಳನ್ನು ಬೆಳೆಸಲು ಯಾವ ಕ್ರಮ ಕೈಗೊಳ್ಳಲಾಗಿದೆ; ಈವರೆಗೆ ಎಷ್ಟು ಮರಗಳನ್ನು ಬೆಳೆಸಲಾಗಿದೆ; ಇದಕ್ಕೆ ವಿನಿಯೋಗಿಸಿದ ಮೊತ್ತವೆಷ್ಟು? (ಮಂಡ್ಯ ಜಿಲ್ಲೆಯ ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಹೊರಗುತ್ತಿಗೆ ಕಾರ್ಮಿಕರನ್ನು ಸರಬರಾಜು ಮಾಡುವ ಏಜೆನ್ಸಿಗಳ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) :–**

೫೫೯ (೬೧೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೊರಗುತ್ತಿಗೆ ಕಾರ್ಮಿಕರನ್ನು ಸರಬರಾಜು ಮಾಡುವ ಏಜೆನ್ಸಿಗಳು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಹಾಗಿದ್ದಲ್ಲಿ, ಹೊರಗುತ್ತಿಗೆ ಏಜೆನ್ಸಿಗಳು ನಿರ್ವಹಿಸುತ್ತಿರುವ ಸರ್ಕಾರಿ, ಅರೆ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳ ವಿವರವಾದ ಮಾಹಿತಿಯನ್ನು ಜಿಲ್ಲಾವಾರು ನೀಡುವುದು;

(ಆ) ಹೊರಗುತ್ತಿಗೆಗಳು ಕಾನೂನು ಬದ್ಧವಾಗಿ ನಿರ್ವಹಿಸಲು ಇರುವ ಕಾನೂನಿನ ಮಾಹಿತಿ ನೀಡುವುದು; ಕಾನೂನು ಉಲ್ಲಂಘಿಸಿದ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು?

## ರಾಯಚೂರು ಜಿಲ್ಲೆಯಲ್ಲಿರುವ ಕಾರ್ಮಿಕರುಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೦ (೭೭೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಕಾರ್ಮಿಕರುಗಳ ಸಂಖ್ಯೆ ಎಷ್ಟು;

(ಆ) ಕಾರ್ಮಿಕರ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಯೋಜನೆಗಳಾವುವು;

(ಇ) ರಾಯಚೂರು ಜಿಲ್ಲೆಯಲ್ಲಿ ಕಾರ್ಮಿಕರ ಇಲಾಖೆಯಿಂದ ಕಾರ್ಮಿಕರಿಗೋಸ್ಕರ ಕಾರ್ಮಿಕರ ಭವನ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ರಾಯಚೂರು ಜಿಲ್ಲೆಯಲ್ಲಿ ಇಎಸ್‌ಐ ಆಸ್ಪತ್ರೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ಕಂದಾಯ ಗ್ರಾಮಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೧ (೭೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಕ್ಯಾಂಪ್, ತಾಂಡಾ ಗೊಲ್ಲರ ಹಟ್ಟಿ, ಇವುಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇಲ್ಲಿವರೆಗೂ ಪರಿವರ್ತಿಸಲಾಗಿರುವ ಕಂದಾಯ ಗ್ರಾಮಗಳು ಎಷ್ಟು;

(ಆ) ರಾಯಚೂರು ಜಿಲ್ಲೆಯಲ್ಲಿರುವ ಉಪನೋಂದಣಾಧಿಕಾರಿಗಳ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕು/ಪಟ್ಟಣದಲ್ಲಿ ಉಪನೋಂದಣಾಧಿಕಾರಿಗಳ ಕಟ್ಟಡವು ಶಿಥಿಲ ವ್ಯವಸ್ಥೆಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ನೂತನ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಲಿಂಗಸುಗೂರು ತಾಲ್ಲೂಕಿನ ಮುದಗಲ್ಲು ಪಟ್ಟಣದಲ್ಲಿ ನೂತನ ನಾಡ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬಾಲ ನ್ಯಾಯ ಮಂಡಳಿಗಳನ್ನು ರಚಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೭೨ (೬೯೫) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಬಾಲನ್ಯಾಯ ಮಂಡಳಿಗಳನ್ನು ರಚಿಸಲಾಗಿದೆ;

(ಆ) ಈ ಮಂಡಳಿಗಳ ಎಲ್ಲಾ ನ್ಯಾಯಾಧೀಶರು, ಸದಸ್ಯರು, ಪಬ್ಲಿಕ್ ಪ್ರಾಸಿಕ್ಯೂಟರ್‌ಗಳಿಗೆ ಮಕ್ಕಳ ನ್ಯಾಯ ಕಾಯ್ದೆ ಮತ್ತು ಇದಕ್ಕೆ

ಸಂಬಂಧಪಟ್ಟ ವಿಚಾರಗಳ ಕುರಿತು ತರಬೇತಿ ನೀಡಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು; (ವಿವರ ನೀಡುವುದು)

(ಇ) ಮುಂಬರುವ ದಿನಗಳಲ್ಲಿ ತರಬೇತಿ ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಯಾವುದೇ ಮಗು ಅನಾಥವಾಗಬಾರದೆಂದು ದತ್ತು ಪಡೆಯುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೬೩ (೬೯೭) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಫಾಸ್ಟರ್ ಕೇರ್ ಯೋಜನೆಗೆ ಚಾಲನೆ ನೀಡಲಾಗಿದೆಯೇ:

(ಆ) ರಾಜ್ಯದಲ್ಲಿ ನೋಂದಾಯಿತವಾದ ಫಾಸ್ಟರ್ ಕೇರ್ ಸಂಸ್ಥೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಫಾಸ್ಟರ್ ಕೇರ್ ಸಂಸ್ಥೆಗಳಲ್ಲಿರುವ ಮಕ್ಕಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಇಂತಹ ಯೋಜನೆಗಳಿಗೆ ಸರ್ಕಾರದಿಂದ ನೀಡಲಾಗುವ ಅನುದಾನ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣವನ್ನು ಇದಕ್ಕಾಗಿ ಮೀಸಲಿಡಲಾಗಿದೆ ಮತ್ತು ಎಷ್ಟು ಖರ್ಚಾಗಿದೆ; ಇದರಿಂದ ಎಷ್ಟು ಮಕ್ಕಳಿಗೆ ಪ್ರಯೋಜನವಾಗಿದೆ ?

# ಗೋವಾ ಸರ್ಕಾರವು ರಾಜ್ಯದಿಂದ ವಿದ್ಯುತ್‌ಲೈನ್ ಎಳೆಯಲು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೫೬೪ (೬೯೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ವಿದ್ಯುತ್ ಜಾಲ ವಿತರಣಾ ಕೇಂದ್ರ ನರೇಂದ್ರದಲ್ಲಿದ್ದು, ಗೋವಾ ಸರ್ಕಾರವು ಕಂಪನಿಯೊಂದರೊಂದಿಗೆ ಒಪ್ಪಂದ ಮಾಡಿಕೊಂಡು ೪೦೦ ಮೆಗಾ ವ್ಯಾಟ್ ವಿದ್ಯುತ್ ಲೈನ್ ಎಳೆದು ಪೂರೈಸಲು ಯೋಜನೆ ಹಾಕಿಕೊಂಡಿರುವುದು ನಿಜವೇ;

(ಆ) ಈ ಯೋಜನೆಯನ್ನು ಕೈಗೆತ್ತಿಕೊಳ್ಳುವುದಾದರೆ ನರೇಂದ್ರದಿಂದ ಗೋವಾದ ಎಕ್ಸಡೆಂ ತನಕ ಸುಮಾರು ೧೫೦ ಕಿ.ಮೀ. ವರೆಗೂ ವಿದ್ಯುತ್ ಲೈನ್ ಅಳವಡಿಸಬೇಕಾಗುತ್ತಿದ್ದು, ಈ ಮಾರ್ಗದಲ್ಲಿ ಬೆಳಗಾವಿ ಜಿಲ್ಲೆಯ ೧೦೧ ಹೆಕ್ಟೇರ್, ಧಾರವಾಡ ಜಿಲ್ಲೆಯ ೪.೭೮೬ ಹೆಕ್ಟೇರ್ ಹಾಗೂ ಉತ್ತರ ಕನ್ನಡ ಜಿಲ್ಲೆಯ ೭೦.೫೫ ಹೆಕ್ಟೇರ್ ಅರಣ್ಯ ಭೂಮಿ ಬಳಕೆಯಾಗುತ್ತಿದ್ದು, ಇದರಿಂದ ಸಾವಿರಾರು ಮರಗಳ ಮಾರಣ ಹೋಮವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಉತ್ತರ ಕನ್ನಡ ದಾಂಡೇಲಿ, ಆನೇಧಾಮ, ದಾಂಡೇಲಿಯ ವನ್ಯ ಜೀವಿ ಸುರಕ್ಷಿತ ವಲಯ ಹಾಗೂ ಬೆಳಗಾವಿಯ ಭೀಮಘಡದ ಪರಿಸರ ಸೂಕ್ಷ್ಮ ವಲಯ ಮೂಲಕ ಪ್ರಸ್ತಾವಿತ ವಿದ್ಯುತ್ ಮಾರ್ಗ

ಹಾದು ಹೋಗಲಿದ್ದು ಇದರಿಂದ ಪರಿಸರಕ್ಕೆ ಧಕ್ಕೆಯಾಗುತ್ತಿರುವ ಬಗ್ಗೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಯೋಜನೆಯನ್ನು ಸ್ಥಗಿತಗೊಳಿಸಲು ಸರ್ಕಾರ ಯೋಚಿಸಿದೆಯೇ ? (ವಿವರ ನೀಡುವುದು)

## ಅರ್ಹ ವ್ಯಕ್ತಿ ಸಂಸ್ಥೆಯ ಸಿಬ್ಬಂದಿ ವರ್ಗದವರಿಗೆ ನಿವೃತ್ತಿ ವೇತನ ಹಾಗೂ ಇತರೆ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು):–**

೫೬೫ (೭೬೭) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರದ ಆದೇಶ ಸಂಖ್ಯೆ : ಮಮಇ :೫೫:ಮಭಾಬ:೨೦೧೫ರ ಆದೇಶದಂತೆ ಅರ್ಹ ವ್ಯಕ್ತಿ ಸಂಸ್ಥೆಯ ಸಿಬ್ಬಂದಿ ವರ್ಗದವರಿಗೆ ನಿವೃತ್ತಿ ವೇತನ ಹಾಗೂ ಇನ್ನಿತರ ಸೌಲಭ್ಯ ಒದಗಿರುವಂತೆ ಆದೇಶವಾಗಿದ್ದರೂ ಇದುವರೆವಿಗೂ ಸದರಿ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದಲ್ಲಿ ಸದರಿ ಸೌಲಭ್ಯಗಳನ್ನು ಒದಗಿಸುವಲ್ಲಿನ ವಿಳಂಬಕ್ಕೆ ಕಾರಣಗಳೇನು;

(ಇ) ಯಾವ ಕಾಲಮಿತಿಯಲ್ಲಿ ಸದರಿ ಸೌಲಭ್ಯಗಳನ್ನು ಒದಗಿಸಲಾಗುವುದು ?

## ಕಳೆದ ಮೂರು ವರ್ಷಗಳಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಗೆ ಬಿಡುಗಡೆ ಆಗಿರುವ ಅನುದಾನ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೬ (೬೦೫) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಕ್ಕಳ ಅಭಿವೃದ್ಧಿಗಾಗಿ ಕರ್ನಾಟಕ ಬಾಲವಿಕಾಸ ಅಕಾಡೆಮಿ ಹಮ್ಮಿಕೊಂಡ ಕಾರ್ಯಕ್ರಮಗಳು ಮತ್ತು ಸದರಿ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನಗಳ ಸಂಪೂರ್ಣ ಜಿಲ್ಲಾವಾರು ಮಾಹಿತಿ ನೀಡುವುದು;

(ಆ) ಈ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿ ನಿಗಧಿಪಡಿಸಲಾಗಿದೆಯೇ: (ಇದ್ದಲ್ಲಿ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲು ಯಾವ ಸಂಘ ಸಂಸ್ಥೆ/ಏಜೆನ್ಸಿಗಳಿಗೆ ನೀಡಲಾಗುತ್ತಿದೆ; ಈ ಏಜೆನ್ಸಿ/ಸಂಘ ಸಂಸ್ಥೆಗಳನ್ನು ಆಯ್ಕೆ ಮಾಡುವಾಗ ನಿಗಧಿಪಡಿಸಿರುವ ಮಾನದಂಡಗಳೇನು ?

## ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳಿಂದ ತರಬೇತಿ ನೀಡುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬೭ (೬೦೯) ಮಾನ್ಯ ಮುಜರಾಯಿ ಹಾಗೂ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೌಶಲ್ಯಾಭಿವೃದ್ಧಿ ಕೇಂದ್ರಗಳಿಂದ ವರ್ಷ ಒಂದರಲ್ಲಿ ಎಷ್ಟು ಮಂದಿಗೆ ತರಬೇತಿ ನೀಡಲಾಗುತ್ತಿದೆ; ಯಾವ ಯಾವ ವಿಷಯಗಳ ಮೇಲೆ ತರಬೇತಿಯನ್ನು ನೀಡಲಾಗಿದೆ; ಈ ಕೋರ್ಸ್‌ಗಳಿಗಾಗಿ ಎಷ್ಟು ಹಣ ವಿನಿಯೋಗಿಸಲಾಗಿದೆ; (ವಿವರ ನೀಡುವುದು)

(ಆ) ೨೦೧೬-೧೭ ರಿಂದ ೨೦೧೮-೧೯ ರವರೆಗೆ ರಾಜ್ಯದಲ್ಲಿ ಉದ್ಯೋಗ ಮೇಳ ನಡೆಸಲಾಗಿದೆ; ಎಷ್ಟು ಉದ್ಯೋಗ ಸೃಷ್ಟಿ ಮಾಡಲಾಗಿದೆ; (ವಿವರ ನೀಡುವುದು)

(ಇ) ಕೌಶಲ್ಯಾಭಿವೃದ್ಧಿಯಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ಪಡೆಯಲು ಸರ್ಕಾರದ ಮುಂದಿರುವ ಯೋಜನೆಗಳಾವುವು (ವಿವರ ನೀಡುವುದು)

(ಈ) ಕೌಶಲ್ಯ ಪಡೆದ ಅಭ್ಯರ್ಥಿಗಳಿಗೆ ಗುಡಿಕೈಗಾರಿಕೆಗಳನ್ನು ನಿರ್ಮಿಸಲು ಸರ್ಕಾರ ಯಾವ ರೀತಿ ಸಹಾಯ ಮಾಡುತ್ತದೆ ? (ವಿವರ ನೀಡುವುದು)

## ರಾಜ್ಯದ ವನ್ಯಧಾಮಗಳ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೬೮ (೬೧೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ವನ್ಯಧಾಮಗಳಿವೆ; ಅವುಗಳಾವುವು ಮತ್ತು ವಿಸ್ತೀರ್ಣ ಎಷ್ಟು;

(ಆ) ರಾಜ್ಯದಲ್ಲಿ ವನ್ಯಜೀವಿಗಳ ಗಣತಿ ಕಾರ್ಯವಾಗಿದೆಯೇ: ಯಾವ ಯಾವ ವನ್ಯಜೀವಿಗಳು ಎಷ್ಟು ಸಂಖ್ಯೆಯಲ್ಲಿ ಯಾವ ಯಾವ ಅರಣ್ಯ ಪ್ರದೇಶದಲ್ಲಿವೆ; ವನ್ಯ ಜೀವಿ ಗಣತಿ ಕಾರ್ಯ ಪ್ರಾರಂಭವಾಗದಿದ್ದಲ್ಲಿ ಯಾವಾಗ ಪ್ರಾರಂಭಿಸಲಾಗುವುದು;

(ಇ) ವನ್ಯ ಜೀವಿ ಮತ್ತು ಮಾನವರ ಸಂಘರ್ಷ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ಅಕ್ರಮ ಒತ್ತುವರಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೪(೬೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೇ ೬೩ ರಲ್ಲಿ ೫ ಎಕರೆ ಜಾಗವನ್ನು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಒತ್ತುವರಿ ಮಾಡಿರುವವರ ಹೆಸರು ಮತ್ತು ವಿಳಾಸ ದೊಂದಿಗೆ ವಿವರ ನೀಡುವುದು ;

(ಆ) ಸದರಿ ಜಾಗವನ್ನು ಒತ್ತುವರಿ ಮಾಡಿರುವುದನ್ನು ತೆರವುಗೊಳಿಸಿದ ಕುರಿತು ಆದೇಶವಾಗಿದ್ದರೂ ಸರ್ಕಾರದ ವಶಕ್ಕೆ ಪಡೆಯದಿರಲು ಕಾರಣವೇನು ;

(ಇ) ಈ ರೀತಿಯಾಗಿ ಅಕ್ರಮ ಒತ್ತುವರಿಗೆ ಸಹಕರಿಸಿ ಅನಧಿಕೃತ ಕಟ್ಟಡ ನಿರ್ಮಾಣವಾಗುವವರೆಗೆ ಸಹಕರಿಸಿದ ಯಾವ ಅಧಿಕಾರಿಗಳನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೆ ಅಮಾನತ್ತುಗೊಳಿಸಿ ಶಿಕ್ಷೆಗೆ ಒಳಪಡಿಸಲಾಗಿದೆ ; (ಹೆಸರು ಹುದ್ದೆಯೊಂದಿಗೆ ವಿವರ ನೀಡುವುದು)

(ಈ) ಈ ಅಕ್ರಮ ಒತ್ತುವರಿದಾರರನ್ನು ತೆರವುಗೊಳಿಸುವ ಬಗ್ಗೆ ಸರ್ಕಾರದ ನಿಲುವೇನು ; ಅಕ್ರಮ ಒತ್ತವರಿದಾರರನ್ನು ಯಾವಾಗ ತೆರವುಗೊಳಿಸಿ ಅಕ್ರಮ ಕಟ್ಟಡವನ್ನು ನೆಲ ಸಮಗೊಳಿಸಲಾಗುವುದು ; ಈ ಅಕ್ರಮವು ಕಾನೂನು ಸುವ್ಯವಸ್ಥೆಗೆ ತೊಂದರೆ ಉಂಟು ಮಾಡಲು ಕಾರಣವಾದರೆ ಅದಕ್ಕೆ ಜವಾಬ್ದಾರರು ಯಾರು ; ಒತ್ತುವರಿ ಜಾಗವನ್ನು ತೆರವುಗೊಳಿಸಿ ಜಾಗವನ್ನು ಸರ್ಕಾರದ ವಶಕ್ಕೆ ಪಡೆಯದ ಜಿಲ್ಲಾಧಿಕಾರಿಯವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕ್ರಮ ಕೈಗೊಳ್ಳದಿರಲು ಕಾರಣವೇನು ?

## ವನ್ಯ ಜೀವಿ ಸಂತ್ರಸ್ತರ ಕುರಿತು

**ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೦ (೬೧೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವನ್ಯ ಜೀವಿ ಸಂಘರ್ಷದ ಸಂತ್ರಸ್ತರ ಮನವಿಗಳನ್ನು ಸ್ವೀಕರಿಸಿ ಸರ್ಕಾರಕ್ಕೆ ಸಲ್ಲಿಸಲು ಸರ್ಕಾರದ ವತಿಯಿಂದ ಯಾವ ಯಾವ ಸೇವಾ ಸಂಸ್ಥೆಗಳನ್ನು ಗುರುತಿಸಲಾಗಿದೆ ; ಅವುಗಳ ಕೆಲಸಗಳೇನು; ಸಂತ್ರಸ್ತರ ಮನವಿಯನ್ನು ಸರ್ಕಾರ ಸಲ್ಲಿಸಲು ಬ್ರೋಕರ್‌ಗಳ ಅವಶ್ಯಕತೆ ಇದೆಯೇ ;

(ಆ) ಸ್ವಯಂಸೇವಾ ಸಂಸ್ಥೆಗಳು ಸಂರಕ್ಷಿತ ಅರಣ್ಯದಲ್ಲಿ ಕಾರ್ಯ ಚಟುವಟಿಕೆಗಳನ್ನು ನಡೆಸಲು ಸರ್ಕಾರ ಅನುಮತಿ ನೀಡಿದೆಯೇ;

ಇಲ್ಲವಾದಲ್ಲಿ ಅಕ್ರಮವಾಗಿ ಅರಣ್ಯದಲ್ಲಿ ಕಾರ್ಯ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಸ್ಥೆಗಳ ಮೇಲೆ ಯಾವ ಕ್ರಮ ಕೈಗೊಂಡಿದೆ ;

(ಇ) ನಾಗರಹೊಳೆ ಮತ್ತು ಬಂಡೀಪುರ ಹುಲಿ ಸಂರಕ್ಷಿತ ಅರಣ್ಯದಲ್ಲಿ ಕಾರ್ಯನಿರ್ವಹಿಸತ್ತಿರುವ ಸ್ವಯಂಸೇವಾ ಸಂಸ್ಥೆಗಳು ಸೇವೆಯ ಹೆಸರಿನಲ್ಲಿ ಅರಣ್ಯ ಸಂಪತ್ತನ್ನು ಲೂಟಿ ಹೊಡೆಯುವುದು ಅಥವಾ ವನ್ಯ ಜೀವಿಗಳ ಬೇಟೆ ಮಾಡುತ್ತಿಲ್ಲ ಎಂಬುದಾಗಿ ಸರ್ಕಾರ ರಾಜ್ಯದ ಜನತೆಗೆ ಖಾತರಿ ನೀಡುತ್ತದೆಯೇ ; ಇಲ್ಲವಾದಲ್ಲಿ ಅಂತಹ ಸ್ವಯಂಸೇವಾ ಸಂಸ್ಥೆಗಳನ್ನು ಮೀಸಲು ಅರಣ್ಯದಲ್ಲಿ ಅನಧಿಕೃತವಾಗಿ ಪ್ರವೇಶ ಮಾಡದಂತೆ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕಟ್ಟಡ ಕಾರ್ಮಿಕರ ಮಂಡಳಿಯಲ್ಲಿ ಅವ್ಯವಹಾರ ನಡೆದಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೧ (೬೧೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ೧೮.೦೧.೨೦೦೭ ರಂದೇ ಅಸ್ತಿತ್ವಕ್ಕೆ ಬಂದಿದ್ದರೂ ದಿನಾಂಕ: ೦೫.೦೨.೨೦೧೮ ರಂದು ಆದಾಯ ತೆರಿಗೆ ಇಲಾಖೆಯಿಂದ ೪೧೩.೦೮ ಕೋಟಿ ತೆರಿಗೆ ಬಾಕಿ ಇದೆ ಎಂಬ ನೋಟೀಸ್ ಬಂದ ೬ ತಿಂಗಳ ಬಳಿಕ

ದಿನಾಂಕ: ೨೮-೮-೨೦೧೮ರಂದು ಆದಾಯ ತೆರಿಗೆ ಕಾಯ್ದೆ ಕಲಂ ೧೦(೪೬) ಅಡಿಯಲ್ಲಿ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸಿದ್ದು, ಈ ರೀತಿಯ ತೀವ್ರ ಕರ್ತವ್ಯ ನಿರ್ಲಕ್ಷ ವಹಿಸಿದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಆ) ಮಂಡಳಿಯು ಅಸ್ತಿತ್ವಕ್ಕೆ ಬಂದ ೧೧ ವರ್ಷಗಳ ಕಾಲ ಆದಾಯ ತೆರಿಗೆ ಕಾಯ್ದೆ ಕಲಂ ೧೦ (೪೬) ಅಡಿಯಲ್ಲಿ ತೆರಿಗೆ ವಿನಾಯಿತಿ ಕೋರಿ ಮನವಿ ಸಲ್ಲಿಸದಿರಲು ಕಾರಣವೇನು ; ಈ ಪ್ರಕರಣದಲ್ಲಿ ಸಂಪೂರ್ಣವಾಗಿ ಮಂಡಳಿಯ ಅಧಿಕಾರಿ ಮತ್ತು ಸಿಬ್ಬಂದಿಗಳ ಕರ್ತವ್ಯದಲ್ಲಿ ತೀವ್ರ ತರದ ನಿರ್ಲಕ್ಷ ಧೋರಣೆ ಸ್ಪಷ್ಟವಾಗಿ ಗೋಚರಿಸುತ್ತಿದ್ದು, ಸಂಬಂಧಿತ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ಅಮಾನತ್ತುಗೊಳಿಸಿ ವಿಚಾರಣೆ ನಡೆಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ರೂ. ೪೧೩.೦೮ ಕೋಟಿ ರೂಗಳಲ್ಲಿ ಕೇವಲ ೮೦ ಶೇಕಡಾ ಮಾತ್ರವೇ ಆದಾಯ ತೆರಿಗೆ ಇಲಾಖೆಯಿಂದ ವಾಪಾಸ್ ಪಡೆಯುವ ನಿರೀಕ್ಷೆ ಮಾತ್ರವೇ ಇದ್ದು ೨೦ ಶೇಕಡಾ ನಷ್ಟಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಬಾಕಿ ಉಳಿದ ೨೦ ಶೇಕಡಾ ಮೊತ್ತವನ್ನು ಸಂಬಂಧಿತ ಅಧಿಕಾರಿಗಳಿಂದ ವಸೂಲಿ ಮಾಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಈ) ಸಾಮಾನ್ಯ ಬಡ ಕಟ್ಟಡ ಕೂಲಿ ಕಾರ್ಮಿಕರಿಗೆ ಅನ್ಯಾಯ ಮಾಡಿರುವ ಅಧಿಕಾರಿಗಳಿಂದಲೇ ನಷ್ಟವಾಗಿರುವ ಮೊತ್ತ ಮತ್ತು ವಕೀಲರ ಮೊತ್ತವನ್ನು ವಸೂಲಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ಯಾವಾಗ ?

## ವೃದ್ಧ ಪಾಲಕರನ್ನು ರಕ್ಷಿಸುವ ಕುರಿತು

**ಶ್ರೀ ಎನ್. ರವಿಕುಮಾರ್(ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೨ (೬೨೦) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೃದ್ಧ ಪಾಲಕರನ್ನು ಇಂದಿನ ಯುವ ಜನಾಂಗ ಕಡೆಗಣಿಸುತ್ತಿದ್ದು, ಅಸಹಾಯಕ ವೃದ್ಧರ ರಕ್ಷಣೆ ಮತ್ತು ಸುರಕ್ಷತೆಯ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ವೃದ್ಧಾಶ್ರಮ ಮತ್ತು ಅನಾಥಾಶ್ರಮಗಳನ್ನು ಸಂಯೋಜಿಸಿ ಮನೆ ವಾತಾವರಣ ಇರುವಂತಹ ಹೊಸ ತರಹದ ಪಾಲನಾ ಗೃಹಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ವೃದ್ಧರನ್ನು ಕಡೆಗಣಿಸಿ ಅವರ ಅಂತಿಮ ದಿನಗಳಲ್ಲಿ ಬೀದಿಗೆ ದೂಡುವ ಕುಟುಂಬಸ್ಥರ ಮೇಲೆ ಕ್ರಮ ಕೈಗೊಳ್ಳುವ ಕಾನೂನು ರೂಪಿಸುವ ಬಗ್ಗೆ ಸರ್ಕಾರದ ನಿಲುವೇನು ?

## ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಲ್ಲಿ ಸಂಭವಿಸಿರುವ ನಷ್ಟಕ್ಕೆ ನೀಡಿರುವ ಪರಿಹಾರ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೭೩ (೭೬೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸಂಭವಿಸಿದ ಪ್ರಕೃತಿ ವಿಕೋಪದಿಂದಾಗಿ ಸಂಭವಿಸಿರುವ ವಲಯವಾರು ನಷ್ಟವೆಷ್ಟು ; (ವಲಯವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ವಿವಿಧ ವಲಯವಾರು ಸಂಭವಿಸಿರುವ ನಷ್ಟದ ಮೊತ್ತವನ್ನು ಅಂದಾಜಿಸಿರುವ ಪ್ರಕಾರ ಪರಿಹಾರ ಭರಿಸಲಾಗಿದೆಯೇ ;

(ಇ) ಪರಿಹಾರ ಭರಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪರಿಹಾರ ಮೊತ್ತವನ್ನು ಭರಿಸಲಾಗುವುದು ?

## ಬೀದರ್ ಜಿಲ್ಲೆಯ ಮೌಲಾನಾ ಆಜಾದ್ ಉರ್ದು ವಿಶ್ವವಿದ್ಯಾಲಯಕ್ಕೆ ಮಂಜೂರಾದ ಭೂಮಿಯ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೪ (೬೧೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ (ಮೌಲಾನಾ ಆಜಾದ್ ನ್ಯಾಷನಲ್ ಉರ್ದು ವಿಶ್ವವಿದ್ಯಾಲಯಕ್ಕೆ) ಸೆಟಲೈಟ್ ಕ್ಯಾಂಪಸ್‌ಗೆ ಎಷ್ಟು ಎಕರೆ ಜಮೀನನ್ನು ಹಾಗೂ ಎಲ್ಲಿ ಯಾವ ಸ್ಥಳದಲ್ಲಿ ನೀಡಲಾಗಿದೆ ; (ವಿವರವಾದ ಮಾಹಿತಿಯನ್ನು ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ ಹೊಸದಾಗಿ ಎಷ್ಟು ಕಂದಾಯ ಗ್ರಾಮಗಳಾಗಿವೆ ; ಬೀದರ್ ಜಿಲ್ಲೆಯಲ್ಲಿ ೨೦೧೬ ರಿಂದ ೨೦೧೯ರವರೆಗೆ ಎಷ್ಟು ಎಕರೆ Non Agriculture (ಜಮೀನನ್ನು ಕೃಷಿಯೇತರ ಭೂಮಿಯಾಗಿ) ಮಾಡಲಾಗಿದೆ ?

## ಕ್ರೀಡಾ ಅನುದಾನದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೫ (೬೦೨) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ರಾಜ್ಯ ಮತ್ತು ಜಿಲ್ಲಾಮಟ್ಟದ ಯುವ ಜನ ಮೇಳಕ್ಕೆ ಗರಿಷ್ಠ ಎಷ್ಟು ಅನುದಾನದ ಲಭ್ಯವಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ೨೦೧೬–೧೭ ರಿಂದ ೨೦೧೯–೨೦ ನೇ ಸಾಲಿನಲ್ಲಿ ಕಾರವಾರ ಜಿಲ್ಲೆಗೆ ಯಾವ ಯಾವ ಕಾರ್ಯಕ್ರಮಗಳಡಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಕಾರ್ಯಕ್ರಮಗಳ ಸಹಿತ ನೀಡಲಾದ ಅನುದಾನದ ಅಂಕಿ–ಅಂಶಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ? (ತಿಂಗಳವಾರು, ವರ್ಷವಾರು)

## ಬರಗಾಲ ಆಗಿರುವ ತಾಲ್ಲೂಕುಗಳಲ್ಲಿ ಕೈಗೊಂಡ ಕ್ರಮದ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೬ (೬೦೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಆಗಿರುವ ಮಳೆಯ ಪ್ರಮಾಣವೆಷ್ಟು ; ಯಾವ ಯಾವ ಭಾಗದಲ್ಲಿ ಮಳೆಯ ಕೊರತೆಯಾಗಿದೆ ; ಬರಗಾಲ, ತೀವ್ರ ಬರಗಾಲ ಪೀಡಿತ ತಾಲ್ಲೂಕುಗಳ ಸಂಖ್ಯೆ ಎಷ್ಟು; (ಹೆಸರು ಸಹಿತ ವಿವರ ಒದಗಿಸುವುದು)

(ಆ) ಬರ ನಿರ್ವಹಣೆಗೆ ಕೈಗೊಂಡಿರುವ ಶಾಶ್ವತ ಪರಿಹಾರ ಕಾರ್ಯಕ್ರಮಗಳಾವುವು ; ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿರುವ ಆರ್ಥಿಕ ನೆರವು ಎಷ್ಟು ;

(ಇ) ಜನ–ಜಾನುವಾರುಗಳಿಗೆ ಕುಡಿಯುವ ನೀರು ಹಾಗೂ ಅಂತರ್ಜಲ ವೃದ್ಧಿಸಲು ನಿರ್ಮಿಸಿರುವ ಗೊಕಟ್ಟೆ (ಕಂಠ) ಮತ್ತು ಇಂಗು ಗುಂಡಿಗಳೆಷ್ಟು ನಿರ್ಮಾಣಕ್ಕೆ ನೀಡಲಾಗುತ್ತಿರುವ ಹಣವೆಷ್ಟು ;

(ಈ) ರಾಜ್ಯದ ಸರಾಸರಿ ಕೃಷಿ ಆದಾಯ ಎಷ್ಟು ; ಪ್ರತಿ ರೈತರ ಸರಾಸರಿ ಆದಾಯ ಎಷ್ಟು ; ಲಭ್ಯವಿರುವ ಕೃಷಿ ಭೂಮಿ ಹಾಗೂ ಬೇಡಿಕೆ ಎಷ್ಟಿದೆ ?

## ದ್ವಿಚಕ್ರ ವಾಹನಗಳ ಸೌಲಭ್ಯ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೭ (೬೦೩) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ವಿಕಲಚೇತನರಿಗೆ ನೀಡುತ್ತಿರುವ ಸುಧಾರಿತ ದ್ವಿಚಕ್ರ ವಾಹನಗಳ ಸೌಲಭ್ಯವನ್ನು ಪಡೆಯಲು ನಿಗದಿ ಮಾಡಿರುವ ಮಾನದಂಡವೇನು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಕಾರವಾರ ಜಿಲ್ಲೆಗಳಲ್ಲಿ ಎಷ್ಟು ವಿಕಲಚೇತನರಿಂದ ಸುಧಾರಿತ ದ್ವಿಚಕ್ರ ವಾಹನಕ್ಕೆ ಅರ್ಜಿ ಸಲ್ಲಿಕೆಯಾಗಿವೆ ; (ವಿವರ ನೀಡುವುದು)

(ಇ) ಇದುವರೆಗೂ ಎಷ್ಟು ವಿಕಲಚೇತನರಿಗೆ ಸುಧಾರಿತ ದ್ವಿಚಕ್ರ ವಾಹನವನ್ನು ವಿತರಿಸಲಾಗಿದೆ ; ಉಳಿದ ಅರ್ಜಿದಾರರಿಗೆ ಯಾವ

ಕಾಲಮಿತಿಯೊಳಗೆ ಸುಧಾರಿತ ದ್ವಿಚಕ್ರ ವಾಹನ ವಿತರಿಸಲಾಗುವುದು; (ವಿವರ ನೀಡುವುದು) ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ನೀಡುವ ಸುಧಾರಿತ ದ್ವಿಚಕ್ರ ವಾಹನಗಳೆಷ್ಟು ? (ಸಂಪೂರ್ಣ ವಿವರ ನೀಡುವುದು)

## ಅಸಂಘಟಿತ ಕಾರ್ಮಿಕರ ಕ್ಷೇಮಾಭಿವೃದ್ಧಿ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೮ (೬೦೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಇರುವ ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಸಂಘಟಿತ ಕಾರ್ಮಿಕರ ಕ್ಷೇಮಾಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅಸಂಘಟಿತ ಕಾರ್ಮಿಕರನ್ನು ಯಾವ ಮಾನದಂಡದಲ್ಲಿ ಗುರುತಿಸಲಾಗುವುದು ?

## ಮಳೆ ಕೊರತೆಯಿಂದ ಬೆಳೆ ನಷ್ಟವಾಗಿರುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೯ (೬೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ತೀವ್ರವಾದ ಮಳೆ ಕೊರತೆಯಿಂದಾಗಿ ಕೃಷಿ ಮತ್ತು

ತೋಟಗಾರಿಕೆ ವಲಯದಲ್ಲಿ ಆಗಿರುವ ಬೆಳೆ ನಷ್ಟದ ವಿವರ ನೀಡುವುದು ;

(ಆ) ಈ ಬೆಳೆ ನಷ್ಟ ಪರಿಹಾರಕ್ಕೆ ರಾಜ್ಯ ಸರ್ಕಾರ ನೀಡಿರುವ ಪರಿಹಾರದ ಮೊತ್ತ ಎಷ್ಟು ; (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

(ಇ) ಕೇಂದ್ರ ಸರ್ಕಾರವು ಇದುವರೆವಿಗೂ ಒದಗಿಸಿರುವ ಪರಿಹಾರ ಮೊತ್ತ ಹಾಗೂ ರೈತರಿಗೆ ಹಂಚಿಕೆಯಾಗಿರುವ ಮೊತ್ತವೆಷ್ಟು ? (ತಾಲ್ಲೂಕುವಾರು, ಜಿಲ್ಲಾವಾರು ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ನಾಡ ಕಛೇರಿಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೦ (೬೯೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ನಾಡ ಕಛೇರಿಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸ್ವಂತ ಕಟ್ಟಡಗಳಲ್ಲಿ ಮತ್ತು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಛೇರಿಗಳೆಷ್ಟು ; (ವಿವರ ನೀಡುವುದು)

(ಆ) ಈ ನಾಡ ಕಛೇರಿಗಳಲ್ಲಿ ಭೂಮಿ ಕೇಂದ್ರದ ವ್ಯವಸ್ಥೆ ಇದೆಯೇ ;

(ಇ) ಈ ಕಛೇರಿಗಳಿಗೆ ನೀಡಲಾಗುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ನಮೂನೆ ೫೦ ಮತ್ತು ೫೩ರ ಅಕ್ರಮ–ಸಕ್ರಮದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೧ (೬೯೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನಮೂನೆ ೫೦ ಮತ್ತು ೫೩ ರಲ್ಲಿ ಅಕ್ರಮ ಸಕ್ರಮದಡಿ ಭೂ ಮಂಜೂರಾತಿ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಇವುಗಳಲ್ಲಿ ವಿಲೇವಾರಿಗೊಂಡಿರುವ ಹಾಗೂ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಅರ್ಜಿಗಳು ಬಾಕಿ ಉಳಿಯಲು ಕಾರಣವೇನು ? (ವಿವರ ನೀಡುವುದು

## ಬೆಳೆ ಪರಿಹಾರ ನೀಡುವ ಬಗ್ಗೆ

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೨ (೬೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಬರಗಾಲದಿಂದಾಗಿ ಹಾನಿಗೊಳಗಾದ ಬೆಳೆಗಳ ಜಮೀನಿನ ವಿಸ್ತೀರ್ಣವೆಷ್ಟು ; ಹಾಗೂ ಬೆಳೆಯ ನಷ್ಟವೆಷ್ಟು ; (ಬೆಳೆವಾರು ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

(ಆ) ಹಾನಿಗೊಳಗಾದ ಬೆಳೆಗಳಿಗೆ ಪರಿಹಾರ ನೀಡಲಾಗಿದೆಯೇ ; ನೀಡಿದ್ದಲ್ಲಿ, ಬೆಳೆವಾರು ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು ;

(ಇ) ಬೆಳೆ ಪರಿಹಾರ ನೀಡದಿದ್ದಲ್ಲಿ, ಸರ್ಕಾರವು ಈವರೆಗೆ ಕೈಗೊಂಡ ಕ್ರಮಗಳೇನು ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 099/250 ಪ್ರತಿಗಳು/18–07–2019